ಆಯುಕ್ತರ ಕಛೇರಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ನಂ.16/ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ,
ಬೆಂಗಳೂರು-52. ದೂ:080-29505520,
ಇ-ಮೇಲ್: bcwd.scholarship@karnataka.gov.in

ಸಂ:ಹಿಂವಕಇ/ವಿವೇ/ಸಿಆರ್-20/2021-22 ದಿನಾಂಕ: 13.12.2021.

ಗೆ,
ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ
ವರ್ಗಗಳ ಕಲ್ಯಾಣಾಧಿಕಾರಿಗಳಿಗೆ.

ಮಾನ್ಯರೆ,

ವಿಷಯ: 2021-22ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ಪ್ರವರ್ಗ-1 ವಿದ್ಯಾರ್ಥಿಗಳಿಂದ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2021-22ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು 31.12.2021 ಕ್ಕೆ ನಿಗದಿಪಡಿಸಲಾಗಿತ್ತು.

ವಿದ್ಯಾರ್ಥಿಗಳು ಮತ್ತು ಶೈಕ್ಷಣಿಕ ಸಂಸ್ಥೆಗಳಿಂದ ಅರ್ಜಿ ಸಲ್ಲಿಕೆಯ ದಿನಾಂಕವನ್ನು ವಿಸ್ತರಿಸಲು ಮನವಿಯನ್ನು ಮಾಡಿಕೊಂಡಿರುತ್ತಾರೆ. ಆದ ಕಾರಣ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು 31.01.2022 ರವರೆಗೆ ವಿಸ್ತರಿಸಿದೆ. ಈ ಪತ್ರಕ್ಕೆ ಲಗತ್ತಿಸಿರುವ ಪ್ರಕಟಣೆಯನ್ನು ಜಿಲ್ಲಾಮಟ್ಟದ ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ 3 ದಿನಗಳ ಕಾಲ ಪ್ರಚುರ ಪಡಿಸುವಂತೆ ಹಾಗೂ ಎಲ್ಲಾ ಸರ್ಕಾರದ ಕಛೇರಿಗಳು ಮತ್ತು ಕಾಲೇಜುಗಳ ನಾಮಫಲಕಗಳಲ್ಲಿ ಪ್ರಕಟಿಸಲು ಕ್ರಮವಹಿಸುವಂತೆ ಸೂಚಿಸಲಾಗಿದೆ.

ನಿಮ್ಮ ವಿಶ್ವಾಸಿ

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ಬೆಂಗಳೂರು.

ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

**ನಂ.16/ಡಿ, 3ನೇ ಮಹಡಿ, ದೇವರಾಜ ಅರಸು ಭವನ,**
**ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು-52**

**ಸಂ: ಹಿಂವಕನಿ/ವಿವೇ/ಸಿಆರ್- 20/2021-22** **ದಿನಾಂಕ: 13.12.2021**

**ಪ್ರಕಟಣೆ**

ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ, 2021-22 ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ", "ಶುಲ್ಕ ವಿನಾಯಿತಿ", ಮತ್ತು "ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, 31.12.2021 ಕ್ಕೆ ಅರ್ಜಿ ಸಲ್ಲಿಸುವ ಅಂತಿಮ ದಿನಾಂಕವನ್ನು ನಿಗದಿಪಡಿಸಲಾಗಿದ್ದು, ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ಪೋಷಕರು/ವಿದ್ಯಾರ್ಥಿಗಳು/ಶಿಕ್ಷಣ ಸಂಸ್ಥೆಗಳು ಮನವಿ ಸಲ್ಲಿಸಿದ್ದು, ಪ್ರಯುಕ್ತ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕವನ್ನು 31-01-2022 ರವರೆಗೆ ವಿಸ್ತರಿಸಲಾಗಿದೆ.

| | |
|---|---|
| • **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ :** | **31.01.2022** |
| • **ಆನ್‌ಲೈನ್ ಮೂಲಕ ಅರ್ಜಿಸಲ್ಲಿಸಬೇಕಾದ ವೆಬ್ ಸೈಟ್ ವಿಳಾಸ :** | www.ssp.postmatric.karnataka.gov.in |
| • **ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ಭೇಟಿ ನೀಡಬೇಕಾದ ವೆಬ್ ಸೈಟ್ ವಿಳಾಸ** | www.bcwd.karnataka.gov.in/ |
| • **ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ :** | 8050770005/ 8050770004 |
| **ಇಮೇಲ್:** | bcwd.scholarship@karnataka.gov.in |
| • **ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇಮೇಲ್:** | postmatrichelp@karnataka.gov.in |
| **ದೂರವಾಣಿ ಸಂಖ್ಯೆ:** | 080-35254757 |

**ಆಯುಕ್ತರು**
**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**
**ಬೆಂಗಳೂರು**